# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 306 |
| ಸದಸ್ಯರ ಹೆಸರು | : | ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 29.01.2026 |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಮೈಸೂರಿನ ಕೆ.ಆರ್.ಎಸ್. (KRS) ಆವರಣದಲ್ಲಿರುವ ಬೃಂದಾವನ ಉದ್ಯಾನವನವನ್ನು ಅಂತರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸುವ 'ಡಿಸ್ನಿಲ್ಯಾಂಡ್' ಮಾದರಿಯ ಯೋಜನೆ ಅಥವಾ ನವೀಕರಣ ಕಾರ್ಯವು ಪ್ರಸ್ತುತ ಯಾವ ಹಂತದಲ್ಲಿದೆ; | ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನವನ್ನು ವಿಶ್ವದರ್ಜೆಗೆ ಉನ್ನತೀಕರಣಗೊಳಿಸುವ ರೂ.2663.74 ಕೋಟಿ ಅಂದಾಜು ಮೊತ್ತದ ಯೋಜನೆಯನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಚೌಕಟ್ಟಿನಲ್ಲಿ ಅನುಷ್ಠಾನಗೊಳಿಸಲು ದಿನಾಂಕ:30.07.2024ರ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯ 3ನೇ ಕರೆಯ ತಾಂತ್ರಿಕ ಮೌಲ್ಯಮಾಪನ ಪರಿಶೀಲನೆಯಲ್ಲಿರುತ್ತದೆ.<br><br>ಈ ಕಾಮಗಾರಿಗೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ WP No:14652/2025-ಶ್ರೀ ಎ.ಬೋರಯ್ಯ V/s ಕಾನೀನಿನಿ ಮತ್ತು ಇತರರ ವಿರುದ್ಧ ದಾವೆಯು ಹೂಡಲಾಗಿದೆ. ಸದರಿ ಪ್ರಕರಣದ ಕುರಿತಂತೆ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದ್ದು, ಪ್ರಕರಣವು ವಿಚಾರಣಾ ಹಂತದಲ್ಲಿದೆ. |
| ಆ) | ಮೈಸೂರು ವಸ್ತು ಪ್ರದರ್ಶನ ಆವರಣದಲ್ಲಿ ವರ್ಷಪೂರ್ತಿ ಪ್ರವಾಸಿ ಚಟುವಟಿಕೆಗಳನ್ನು ನಡೆಸಲು ಮತ್ತು ಅಲ್ಲಿ ಸುಸಜ್ಜಿತ ಮೂಲಸೌಕರ್ಯ ಕಲ್ಪಿಸಲು ಸರ್ಕಾರ ಮೀಸಲಿಟ್ಟ ಅನುದಾನವೆಷ್ಟು; | ಪ್ರವಾಸೋದ್ಯಮ ಇಲಾಖೆಯಿಂದ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದಲ್ಲಿ "ಎ" ಬ್ಲಾಕ್ ಅಭಿವೃದ್ಧಿ ಹಾಗೂ ನೀರಿನ ಕಾರಂಜಿ ಅಭಿವೃದ್ಧಿಗಾಗಿ ರೂ.20.00 ಕೋಟಿ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ. ವರ್ಷ ಪೂರ್ತಿ ಪ್ರವಾಸಿ ಚಟುವಟಿಕೆಗಳನ್ನು ನಡೆಸಲು ಹಾಗೂ ಮೂಲಭೂತ ಸೌಕರ್ಯ ಕಲ್ಪಿಸಲು ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಇ) | ಮೈಸೂರಿನ ಹಿಮ್ಮಾವು ಬಳಿ ನಿರ್ಮಿಸಲು ಉದ್ದೇಶಿಸಲಾಗಿರುವ 'ಚಲನಚಿತ್ರ ನಗರಿ' (Film City) ಯೋಜನೆಯಿಂದ ಪ್ರವಾಸೋದ್ಯಮಕ್ಕೆ ಆಗುವ ಲಾಭಗಳೇನು ಮತ್ತು ಇದರ ಕಾಮಗಾರಿ ವಿಳಂಬವಾಗಲು ಕಾರಣವೇನು: | ಜಾಗತಿಕ ಮಟ್ಟದ ಚಲನಚಿತ್ರಗಳನ್ನು ನಿರ್ಮಿಸಲು ನಿರ್ಮಾಣದ ಆರಂಭದಿಂದ ಅಂತ್ಯದವರೆಗಿನ ಎಲ್ಲಾ ಅವಶ್ಯಕತೆಗಳನ್ನು ಪೂರೈಸಲು ವಿಶ್ವದರ್ಜೆಯ ಮೂಲಸೌಲಭ್ಯ ಸೌಕರ್ಯಗಳನ್ನು ಮೈಸೂರಿನ ಚಿತ್ರನಗರಿಯಲ್ಲಿ ಕನ್ನಡ, ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ ವತಿಯಿಂದ ಒದಗಿಸಲು ಉದ್ದೇಶಿಸಿದ್ದು, ಸದರಿ ಚಿತ್ರನಗರಿಯು ಮಾಧ್ಯಮ ಮತ್ತು ಮನರಂಜನೆಗಾಗಿ ಹೊಸ ಕೇಂದ್ರವಾಗಲಿದ್ದು, ಥೀಮ್ ಪಾರ್ಕ್ ವಸ್ತು ಸಂಗ್ರಹಾಲಯ ಇತ್ಯಾದಿಗಳು ಪ್ರವಾಸಿಗರನ್ನು ಆಕರ್ಷಿಸುವುದರಿಂದ ಚಲನಚಿತ್ರ ಪ್ರವಾಸೋದ್ಯಮ ಮತ್ತು ಹೆಲಿ ಟೂರಿಸಂಗೆ ಉತ್ತೇಜನ ಸಿಗಲಿದ್ದು, ರಾಜ್ಯಕ್ಕೆ ಆದಾಯ ಉತ್ಪಾದನೆಯಾಗಲಿದೆ. |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| | | ಮೈಸೂರಿನ ಚಿತ್ರನಗರಿ ನಿರ್ಮಾಣವನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸುತ್ತಿರುವುದರಿಂದ, ಈಗಾಗಲೇ ನಿಯಮಾನುಸಾರ ನೇಮಿಸಲಾಗಿರುವ Transaction Advisor ಸಂಸ್ಥೆಯು ಯೋಜನೆಯ ಮಧ್ಯಂತರ ವರದಿಯನ್ನು ನೀಡಿದೆ ಹಾಗೂ ಯೋಜನೆಗೆ ಸಂಬಂಧಿಸಿದ ಭಾಗೀದಾರರ (Stake holders) ಸಭೆಯನ್ನು ನಡೆಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾಗಿರುವ ಸಲಹೆಗಳನ್ನು ಪರಿಶೀಲಿಸಿ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿದ ನಂತರ ಕಾಮಗಾರಿಯ ಟೆಂಡರ್ ಆಹ್ವಾನ ಪ್ರಕ್ರಿಯೆ ಪ್ರಾರಂಭಿಸಲಾಗುವುದು. |
| (ಈ) | ಕೇಂದ್ರ ಸರ್ಕಾರದ ಪ್ರಸಾದ್ (PRASHAD) ಯೋಜನೆಯಡಿ ಚಾಮುಂಡಿ ಬೆಟ್ಟದಲ್ಲಿ ಪ್ರವಾಸಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಬಿಡುಗಡೆಯಾದ ಅನುದಾನವೆಷ್ಟು? (ವಿವರ ನೀಡುವುದು): | ಪ್ರವಾಸೋದ್ಯಮ ಇಲಾಖೆ ವತಿಯಿಂದ, ಕೇಂದ್ರ ಸರ್ಕಾರದ ಪ್ರಸಾದ್ (PRASHAD) ಯೋಜನೆಯಡಿ ಚಾಮುಂಡಿ ಬೆಟ್ಟದಲ್ಲಿ ಪ್ರವಾಸಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವ ಯೋಜನೆಯನ್ನು ರೂ.61.99 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ. ಈ ಪೈಕಿ ಇದುವರೆಗೂ ರೂ.13.33 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. |

ಸಂ: ಜಸಂಇ 19 ಎನ್‌ಎಲ್‌ಎ 2026

**(ಡಿ. ಕೆ. ಶಿವಕುಮಾರ್)**
**ಉಪ ಮುಖ್ಯಮಂತ್ರಿ**